**ದಿನಾಂಕಃ 02.08.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ಅಪಘಾತವನ್ನು ನಾನು ಕಣ್ಣಾರೆ ನೋಡಿಲ್ಲ ಎಂದರೆ ಸರಿ. ಅಪಘಾತ ತಡರಾತ್ರಿ 12.30 ಗಂಟೆಯ ಸವಯದಲ್ಲಿ ಸಂಭವಿಸಿರುತ್ತದೆ ಎಂದರೆ ಸರಿ. ಅಪಘಾತದ ಬಗ್ಗೆ ತಡರಾತ್ರಿ 1.45-2 ಗಂಟೆಯ ನಡುವಿನ ಅವಧಿಯಲ್ಲಿ ತಿಳಿದು ಬಂದಿರುತ್ತದೆ. ಅಪಘಾತದ ಬಗ್ಗೆ ದೇವರಾಜು ಎಂಬುವವರು ಕರೆ ಮಾಡಿ ತಿಳಿಸಿರುತ್ತಾರೆ. ಸದರಿಯವರು ನನ್ನ ಗಂಡ ಕೆಲಸ ಮಾಡುವ ಲಾಡ್ಜ್ ನ ಮಾಲೀಕರ ಸ್ನೇಹಿತ. ದ್ವಿಚಕ್ರ ವಾಹನದ ಚಾಲಕ ಮತ್ತು ನನ್ನ ಗಂಡ ಸ್ನೇಹಿತರಲ್ಲ. ಆಪಾದಿತ ವಾಹನದ ಚಾಲಕ ನನ್ನ ಗಂಡ ಕೆಲಸ ಮಾಡುವ ಲಾಡ್ಜ್ ಗೆ ಬರುವ ಗ್ರಾಹಕರಾಗಿರುತ್ತಾರೆ. ನನ್ನ ಗಂಡ ಟ್ರೆಂಡ್ಸ್ ಎಂಬ ಹೆಸರಿನ ಲಾಡ್ಜ್ ನಲ್ಲಿ ಕೆಲಸ ಮಾಡುತ್ತಿದ್ದರು. ಅಲ್ಲಿ ಬಾರ್ ಮತ್ತು ರೆಸ್ಟೋರೆಂಟ್ ಸಹ ಇದೆ ಎಂದರೆ ಇರಬಹುದು, ಆ ಬಗ್ಗೆ ನನಗೆ ಗೊತ್ತಿಲ್ಲ. 1ನೇ ಎದುರುದಾರರಿಗೆ ಅಪಘಾತದಲ್ಲಿ ಗಾಯಗಳು ಆಗಿರುತ್ತವೆ. 1ನೇ ಎದುರುದಾರರು ಯಾವ ಆಸ್ಪತ್ರೆಗೆಯಲ್ಲಿ ಚಿಕಿತ್ಸೆ ಪಡೆದರು ಎಂದು ನನಗೆ ಗೊತ್ತಿಲ್ಲ. ನನ್ನ ಗಂಡ ದ್ವಿಚಕ್ರ ವಾಹನ ಚಾಲಕನಿಗೆ ಅವರನ್ನು ಬಿಡುವ ಬಗ್ಗೆ ಹಣ ನೀಡಿರುವ ಬಗ್ಗೆ ನನಗೆ ಗೊತ್ತಿಲ್ಲ. ಅಪಘಾತವಾದ ಸ್ಥಳದಿಂದ ಟೋಲ್ ಗೇಟ್ ಗೆ ಎಷ್ಟು ದೂರ ಆಗುತ್ತದೆ ಎಂದು ನನಗೆ ಹೇಳಲು ಆಗುವುದಿಲ್ಲ.

ಅಪಘಾತವಾದ ನಂತರ ಶಿರಡಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ಸದರಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಾಗಿರುವುದಿಲ್ಲ, ಕರೆದುಕೊಂಡು ಹೋದಾಗ ಮೃತಪಟ್ಟಿರುವುದಾಗಿ ತಿಳಿಸಿರುತ್ತಾರೆ. ಅಪಘಾತದಲ್ಲಿ ನನ್ನ ಗಂಡನ ತಲೆಗೆ ಪೆಟ್ಟಾಗಿರುತ್ತದೆ ಎಂದರೆ ಸರಿ. ದೇವರಾಜುರವರು ಅಪಘಾತವನ್ನು ನೋಡಿದ್ದಾರೋ, ಇಲ್ಲವೋ ನನಗೆ ಗೊತ್ತಿಲ್ಲ. ಅಪಘಾತವನ್ನು ಕಣ್ಣಾರೆ ಕಂಡ ಪ್ರತ್ಯಕ್ಷದರ್ಶಿಗಳನ್ನು ವಿಚಾರಣೆಗೆ ಒಳಪಡಿಸಲು ತೊಂದರೆ ಇಲ್ಲ ಎಂದರೆ ಸರಿಯಲ್ಲ.

ಅಪಘಾತವನ್ನು ನಾನು ಕಣ್ಣಾರೆ ನೋಡದೇ ಇರುವ ಕಾರಣ ಅಪಘಾತದಲ್ಲಿ ಯಾರ ತಪ್ಪು ಇದೆ ಎಂದು ನಾನು ಹೇಳಲು ಸಾಧ್ಯವಿಲ್ಲ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ನನ್ನ ಗಂಡನನ್ನು ಸೇರಿಸಿದ ಸಾರ್ವಜನಿಕರು ಅಪಘಾತದ ಬಗ್ಗೆ ತಿಳಿಸಿರುತ್ತಾರೆ ಎಂದು ನುಡಿಯುತ್ತಾರೆ. ನನ್ನ ಗಂಡ ವಾಹನದಿಂದ ಬಿಳಲು ಯಾವುದೇ ಕಾರಣ ಇಲ್ಲ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ದ್ವಿಚಕ್ರ ವಾಹನದ ಚಾಲಕ ಏಕಮುಖ ಸಂಚಾರ ರಸ್ತೆಯಲ್ಲಿ ಅತೀವೇಗವಾಗಿ ಹೋದ ಕಾರಣ ನನ್ನ ಗಂಡ ಬಿದ್ದಿರುತ್ತಾರೆ ಎಂದು ನುಡಿಯುತ್ತಾರೆ.

ನನ್ನ ಗಂಡನ ಮರಣೋತ್ತರ ಪರೀಕ್ಷೆಯನ್ನು ನಿಪಿ 7 ರಲ್ಲಿ ನಮೂದಿಸಿರುವ ಆಸ್ಪತ್ರೆಯಲ್ಲಿ ಮಾಡಿರುತ್ತಾರೆ ಎಂದರೆ ಸರಿ. ನಿಪಿ 7 ರ ಪ್ರಕಾರ ನನ್ನ ಗಂಡನ ರಕ್ತದ ಮಾದರಿಯನ್ನು ಪ್ರಯೋಗಾಲಯಕ್ಕೆ ಕಳುಹಿಸಿರುತ್ತಾರೆ ಎಂದರೆ ಸರಿ. ಸದರಿ ಪ್ರಯೋಗಾಲಯದ ವರದಿಯ ಪ್ರಕಾರ ನನ್ನ ಗಂಡ ಮದ್ಯಸೇವನೆ ಮಾಡಿದ್ದರು ಎಂದು ನಮೂದು ಇದೆ ಎಂದರೆ ಸರಿಯಲ್ಲ. ಸದರಿ ವರದಿಯ ಆಧಾರದ ಮೇರೆಗೆ ನನ್ನ ಗಂಡ ಮದ್ಯಸೇವನೆ ಮಾಡಿರುವ ಬಗ್ಗೆ ಅಂತಿಮ ವರದಿಯಲ್ಲೂ ಸಹ ನಮೂದಿಸಲಾಗಿದೆ ಎಂದರೆ ಸರಿಯಲ್ಲ. ನನ್ನ ಗಂಡ ಹೆಚ್ಚಿ ನ ಮದ್ಯವನ್ನು ಸೇವನೆ ಮಾಡಿದ ಪರಿಣಾಮ ಅದರ ಅಮಲಿನಲ್ಲಿ ಆಯ ತಪ್ಪಿ ಕೆಳಗೆ ಬಿದ್ದು ಗಾಯಗೊಂಡು ಮೃತಪಟ್ಟಿರುತ್ತಾರೆ ಎಂದರೆ ಸರಿಯಲ್ಲ. ಸ್ಥಳದಲ್ಲಿದ್ದ ಸಾರ್ವಜನಿಕರು ನನ್ನ ಗಂಡನನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ಹೋಗುತ್ತಿದ್ದ ಬೈಕಿನಿಂದ ನನ್ನ ಗಂಡ ಬಿದ್ದು ಗಾಯಮಾಡಿಕೊಂಡು ಮೃತಪಟ್ಟಿರುತ್ತಾರೆ ಎಂದು ವೈದ್ಯಕೀಯ ದಾಖಾತಿಗಳಲ್ಲಿ ನಮೂದು ಇದೆ ಎಂದರೆ ಸರಿಯಲ್ಲ. ನನ್ನ ಗಂಡ ಹೋಗುತ್ತಿದ್ದ ದ್ವಿಚಕ್ರ ವಾಹವನ್ನು ಪೊಲೀಸರು ಅಮಾನತ್ತುಪಡಿಸಿಕೊಂಡ ಬಗ್ಗೆ ನನಗೆ ಮಾಹಿತಿ ಇಲ್ಲ. ನನ್ನ ಗಂಡ ಹೋಗುತ್ತಿದ್ದ ಬೈಕಿಗೆ ಜಖಂ ಗಳು ಆಗಿಲ್ಲ ಎಂದರೆ ಸರಿಯಲ್ಲ. ಬೈಕನ್ನು ಚಾಲನೆ ಮಾಡುತ್ತಿದ್ದ ವ್ಯಕ್ತಿಯೂ ಸಹ ಮದ್ಯಸೇವನೆ ಮಾಡಿದ್ದರು ಎಂದರೆ ಅದರ ಬಗ್ಗೆ ನನಗೆ ಗೊತ್ತಿಲ್ಲ. ದ್ವಿಚಕ್ರ ವಾಹನದ ಚಾಲಕನ ಅಜಾಗರೂಕತೆಯಿಂದ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ.

ನಾನು ಯಾವುದೇ ಕೆಲಸ ಮಾಡುತ್ತಿಲ್ಲ. ಅಪಘಾತದ ಬಗ್ಗೆ ಪೊಲೀಸರಿಗೆ ನಾನು ಹೇಳಿಕೆ ನೀಡಿಲ್ಲ. ನನ್ನ ಗಂಡನ ಜನ್ಮ ದಿನಾಂಕ 06.09.1975 ಆಗಿರುತ್ತದೆ. ನಾನು ನನ್ನ ಗಂಡನ ಆದಾಯದ ಮೇಲೆ ಅವಲಂಬಿತಳಾಗಿರಲಿಲ್ಲ ಎಂದರೆ ಸರಿಯಲ್ಲ. ನನ್ನ ಗಂಡನ ಆದಾಯದ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿ. ನನ್ನ ಗಂಡನ ಅಂತ್ಯಸಂಸ್ಕಾರಕ್ಕೆ ಮತ್ತು ಇತರೆ ಖರ್ಚು ವೆಚ್ಚಗಳಿಗೆ ನಾನು ಹೇಳಿರುವಷ್ಟು ಹಣ ಖರ್ಚು ಆಗಿಲ್ಲ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ದ್ವಿಚಕ್ರ ವಾಹನದ ಚಾಲಕನ ವಿರುದ್ದ ಸುಳ್ಳು ದೂರು ನೀಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**